**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಸೋಮವಾರಪೇಟೆ.**

**ಓ.ಎಸ್. ನಂಬರ್ : 63/2021**

ಪಿ.ಡಬ್ಲ್ಯೂ : 1

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು
ದಿನಾಂಕ : 30.05.2022

ಹೆಸರು : ಜಗದೀಶ್

ತಂದೆಯ ಹೆಸರು : ಕಪಣಯ್ಯ

**ಮುಖ್ಯ ವಿಚಾರಣೆ : ಶ್ರೀ ಎಂ ಎನ್ ಎಸ್ ವಕೀಲರಿಂದ : ವಾದಿಯ ಪರವಾಗಿ**

ನಾನು ವಾದಿಯಿದ್ದು ನನ್ನ ಮುಖ್ಯ ವಿಚಾರಣೆ ಸಾಕ್ಷ್ಯವಾಗಿ ಶಪಥ ಪತ್ರವನ್ನು ಹಾಜರುಪಡಿಸಿರುತ್ತೇನೆ. ಶಪಥ ಪತ್ರದಲ್ಲಿ ಬರೆಸಿರುವುದನ್ನು ನಾನು ಹೇಳಿ ಬರೆಯಿಸಿದ್ದು ನಂತರ ಅದನ್ನು ಓದಿ ಸಹಿ ಮಾಡಿರುತ್ತೇನೆ. ಶಫಥ ಪತ್ರದಲ್ಲಿ ಬರೆದಿರುವುದು ಎಲ್ಲಾ ಸತ್ಯವಾಗಿರುತ್ತದೆ.

ದಾವಾಸ್ತಿಯ 4 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ ಪಿ 1 ರಿಂದ 4 ಎಂದು, ಮ್ಯುಟೇಶನ್ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 5 ಎಂದು, ಆಕಾರ್ ಬಂದ್ ನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 6 ಎಂದು, ಸರ್ವೆ ನಕಾಶೆಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 7 ಎಂದು, ಪ್ರತಿವಾದಿಯರಿಗೆ ನೀಡಿದ ವಕೀಲರ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 8 ಎಂದು, 3 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ ಪಿ 9 ರಿಂದ 11 ಎಂದು, 3 ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ ಪಿ 12 ರಿಂದ 14

ಎಂದು ಗುರುತಿಸಲಾಯಿತು. ಆದುದರಿಂದ ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ಪ್ರಾರ್ಥನೆ.

ಪಾಟೀ ಸವಾಲು : ಪ್ರತಿವಾದಿಯರ ಪರವಾಗಿ ಶ್ರೀ ಜೆ ಕೆ ವಕೀಲರು ಕಾಲಾವಕಾಶ ಕೋರಿರುತ್ತಾರೆ. ಪ್ರತಿವಾದಪತ್ರ ಸಲ್ಲಿಸಿರುವುದಿಲ್ಲ ಆದುದರಿಂದ ಕಾಲಾವಕಾಶ ನೀಡಲು ಯಾವುದೇ ಸಕಾರಣಗಳು ಇರುವುದಿಲ್ಲ ಆದುದರಿಂದ ಪಾಟಿ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ: ಇರುವುದಿಲ್ಲ

(ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಸೋಮವಾರಪೇಟೆ.